# National
# Kannada
# 12.05.2026 7.35 p.m.
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಕೇಂದ್ರ ಸಚಿವ ಡಾ. ಎಸ್.ಜೈಶಂಕರ್ ಅಧ್ಯಕ್ಷತೆಯಲ್ಲಿ ಇದೇ 14ರಿಂದ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆ
2. ತಮಿಳುನಾಡು ವಿಧಾನಸಭಾಧ್ಯಕ್ಷರಾಗಿ ಜೆಸಿಡಿ ಪ್ರಭಾಕರ್, ಉಪಸಭಾಧ್ಯಕ್ಷರಾಗಿ ರವಿಶಂಕರ್ ಆಯ್ಕೆ
3. ದೇಶೀಯ ಎಲ್‌ಪಿಜಿ ಉತ್ಪಾದನೆ ದಿನಕ್ಕೆ 54 ಸಾವಿರ ಟನ್‌ಗಳಿಗೆ ಹೆಚ್ಚಳ – ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ
4. ಐಪಿಎಲ್ ಟಿ–20 ಕ್ರಿಕೆಟ್: ಗುಜರಾತ್ ಟೈಟನ್ಸ್ ವಿರುದ್ಧ ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್ ಫೀಲ್ಡಿಂಗ್ ಆಯ್ಕೆ

---

ಭಾರತ ಈ ತಿಂಗಳ 14 ಮತ್ತು 15 ರಂದು ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯನ್ನು ಆಯೋಜಿಸಲಿದೆ. ಈ ಸಭೆಯ ಅಧ್ಯಕ್ಷತೆಯನ್ನು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ವಹಿಸಲಿದ್ದಾರೆ.

ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಬ್ರಿಕ್ಸ್ ವಿದೇಶಾಂಗ ಸಚಿವರು ಹಾಗೂ ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳ ನಿಯೋಗಗಳ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಹ ಭೇಟಿ ಮಾಡಲಿದ್ದಾರೆ ಎಂದು ತಿಳಿಸಿದರು.

ಸಭೆಯ ಸಮಯದಲ್ಲಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು, ಪರಸ್ಪರ ಆಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

---

ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು, ಮೇ 3 ರಂದು ನಡೆಸಿದ್ದ ನೀಟ್–ಯುಜಿ 2026 ಪರೀಕ್ಷೆಯನ್ನು ರದ್ದುಗೊಳಿಸಿದ್ದು, ಮರು ಪರೀಕ್ಷೆಯನ್ನು ಹೊಸ ದಿನಾಂಕಗಳಲ್ಲಿ ನಡೆಸಲಾಗುವುದು ಎಂದು ಘೋಷಿಸಿದೆ. ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನೆಲೆಯಲ್ಲಿ ಈ ಕ್ರಮ ತೆಗೆದುಕೊಳ್ಳಲಾಗಿದೆ.

ಸಮಗ್ರ ತನಿಖೆಗಾಗಿ ಈ ಪ್ರಕರಣವನ್ನು ಕೇಂದ್ರ ತನಿಖಾ ದಳಕ್ಕೆ ಹಸ್ತಾಂತರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಅಭ್ಯರ್ಥಿಗಳಿಗೆ ಯಾವುದೇ ಹೊಸ ನೋಂದಣಿ ಅಗತ್ಯವಿಲ್ಲ. ಯಾವುದೇ ಹೆಚ್ಚುವರಿ ಪರೀಕ್ಷಾ ಶುಲ್ಕವನ್ನು ವಿಧಿಸಲಾಗುವುದಿಲ್ಲ ಮತ್ತು ಅಸ್ತಿತ್ವದಲ್ಲಿರುವ ನೋಂದಣಿ ದತ್ತಾಂಶ ಮತ್ತು ಪರೀಕ್ಷಾ ಕೇಂದ್ರಗಳನ್ನು ಮುಂದುವರಿಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಿಳಿಸಿದೆ.

---

ಬಿಜೆಪಿ ನಾಯಕ ಹಿಮಂತ ಬಿಸ್ವಾ ಶರ್ಮಾ ಅವರು ಇಂದು ಅಸ್ಸಾಂನ ಮುಖ್ಯಮಂತ್ರಿಯಾಗಿ ಸತತ ಎರಡನೇ ಬಾರಿಗೆ ಅಧಿಕಾರ ಸ್ವೀಕರಿಸಿದ್ದಾರೆ. ಅವರೊಂದಿಗೆ ಮೈತ್ರಿಕೂಟದ ವಿವಿಧ ಪಕ್ಷಗಳ ನಾಲ್ವರು ಸಚಿವರು ಕೂಡ ಪ್ರಮಾಣವಚನ ಸ್ವೀಕರಿಸಿದರು.

ಅಸ್ಸಾಂ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕಾಂಗ್ರೆಸ್ಸೇತರ ಮುಖ್ಯಮಂತ್ರಿಯೊಬ್ಬರು ಸತತ ಎರಡನೇ ಅವಧಿಗೆ ಆಯ್ಕೆಯಾಗಿದ್ದಾರೆ. ಹಿಮಂತ ಬಿಸ್ವಾ ಶರ್ಮಾ ಅವರೊಂದಿಗೆ ಬಿಜೆಪಿಯ ರಾಮೇಶ್ವರ್ ತೇಲಿ, ಅಜಂತಾ ನಿಯೋಗ್,

ಅಸೋಮ್ ಗಣ ಪರಿಷತ್‌ನ ಅತುಲ್ ಬೋರಾ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್‌ನ ಚರಣ್ ಬೋರೋ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ಗುವಾಹಟಿಯ ಖಾನಾಪಾರ ಪಶುವೈದ್ಯಕೀಯ ಕಾಲೇಜು ಮೈದಾನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ, ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಕೇಂದ್ರ ಸಚಿವರು, ಎನ್‌ಡಿಎ ಆಡಳಿತವಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು.

---

ತಮಿಳುನಾಡು ವಿಧಾನಸಭಾಧ್ಯಕ್ಷರಾಗಿ ಟಿವಿಕೆ ಶಾಸಕ ಜೆಸಿಡಿ ಪ್ರಭಾಕರ್ ಅವರನ್ನು ಇಂದು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಪ್ರಭಾಕರ್ ಹೆಸರನ್ನು ಪ್ರಸ್ತಾಪಿಸಿದ ನಂತರ ಹಂಗಾಮಿ ಸ್ಪೀಕರ್ ಎಂ.ವಿ.ಕರುಪ್ಪಯ್ಯ ಅವರು ಅವರ ಆಯ್ಕೆಯನ್ನು ಘೋಷಿಸಿದರು. ಸದನದ ನಾಯಕ ಕೆ.ಎ.ಸೆಂಗೊಟ್ಟೈಯನ್ ಅನುಮೋದಿಸಿದರು.

ತೊರೈಯೂರ್ ಕ್ಷೇತ್ರದ ಟಿವಿಕೆ ಶಾಸಕ ರವಿಶಂಕರ್ ಉಪಸಭಾಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾದರು.

ಇದೇ ವೇಳೆ ಹಲವು ಸದಸ್ಯರು ವಿಧಾನಸಭೆಯ ಕಲಾಪಗಳ ನೇರ ಪ್ರಸಾರಕ್ಕೂ ಒತ್ತಾಯಿಸಿದರು.

ಮುಖ್ಯಮಂತ್ರಿ ಜೋಸೆಫ್ ವಿಜಯ್ ನೇತೃತ್ವದ ಸರ್ಕಾರ ನಾಳೆ ಸದನದಲ್ಲಿ ವಿಶ್ವಾಸಮತ ಸಾಬೀತುಪಡಿಸಲು ನಿರ್ಧರಿಸಿದೆ.

---

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆ ಭಾರತ ತನ್ನ ಎಲ್‌ಪಿಜಿ ಉತ್ಪಾದನೆಯನ್ನು ದಿನಕ್ಕೆ ಸುಮಾರು 36 ಸಾವಿರ ಟನ್‌ಗಳಿಂದ 54 ಸಾವಿರ ಟನ್‌ಗಳಿಗೆ ಹೆಚ್ಚಿಸಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ವಾರ್ಷಿಕ ವ್ಯವಹಾರ ಶೃಂಗಸಭೆ 2026 ಉದ್ದೇಶಿಸಿ ಮಾತನಾಡಿದ ಸಚಿವರು, ಕಳೆದ ಕೆಲವು ತಿಂಗಳಲ್ಲಿ ಅನೇಕ ರಾಷ್ಟ್ರಗಳು ಬೆಲೆ ಏರಿಕೆ ಮತ್ತು ಇಂಧನ ಕೊರತೆ ಎದುರಿಸುತ್ತಿದ್ದರೂ, ದೇಶೀಯ ಮಾರುಕಟ್ಟೆಯಲ್ಲಿ ಬೆಲೆ ಸ್ಥಿರವಾಗಿಡುವಲ್ಲಿ ಭಾರತ ಯಶಸ್ವಿಯಾಗಿದೆ ಎಂದು ಹೇಳಿದರು.

ದೇಶದಲ್ಲಿ ಪ್ರಸ್ತುತ ಕಚ್ಚಾ ತೈಲ, ಎಲ್‌ಎನ್‌ಜಿ ಮತ್ತು ಎಲ್‌ಪಿಜಿ ಕೊರತೆ ಇಲ್ಲ ಎಂದು ತಿಳಿಸಿದ ಅವರು, ಉದ್ಯಮ ಘಟಕಗಳು ಎಲ್‌ಪಿಜಿಯಿಂದ ಎಲ್‌ಎನ್‌ಜಿಗೆ ವರ್ಗಾವಣೆಯಾಗುವಂತೆ ಮನವಿ ಮಾಡಿದರು.

---

ಸೈಬರ್ ಸುರಕ್ಷಿತ ಭಾರತವನ್ನು ನಿರ್ಮಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅವಿರತವಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಬ್ಯಾಂಕಿಂಗ್ ಮತ್ತು ಡಿಜಿಟಲ್ ಪಾವತಿ ವ್ಯವಸ್ಥೆಯಲ್ಲಿ ಸೈಬರ್-ಸಕ್ರಿಯ ಆರ್ಥಿಕ ವಂಚನೆಗಳನ್ನು ಎದುರಿಸಲು ಮತ್ತು ಅಕ್ರಮ ಹಣ ವರ್ಗಾಯಿಸಲು ವಂಚಕರು ಬಳಸುವ ಬ್ಯಾಂಕ್ ಖಾತೆಗಳನ್ನು ನಿಯಂತ್ರಿಸಲು ಸಹಯೋಗವನ್ನು ಬಲಪಡಿಸುವ ಉದ್ದೇಶದಿಂದ ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರ ಇಂದು ರಿಸರ್ವ್ ಬ್ಯಾಂಕ್ ಇನ್ನೋವೇಶನ್ ಹಬ್‌ನೊಂದಿಗೆ ತಿಳುವಳಿಕಾ ಪತ್ರಕ್ಕೆ ಸಹಿ ಹಾಕಿದೆ.

ಈ ತಿಳುವಳಿಕಾ ಪತ್ರವು ವಂಚನೆ, ಅಪಾಯದ ಮುನ್ಸೂಚನೆಯ ಗುಪ್ತಚರ ಮಾಹಿತಿ ಹಂಚಿಕೆ, ವಿಶ್ಲೇಷಣಾತ್ಮಕ ಬೆಂಬಲ ಮತ್ತು ವಂಚನೆ ಪತ್ತೆ ಹಾಗೂ ತಡೆಗಟ್ಟುವ ಕಾರ್ಯವಿಧಾನಗಳನ್ನು ಬಲಪಡಿಸಲು ಕಾರ್ಯಾಚರಣೆಯ ಸಮನ್ವಯಕ್ಕೆ ಅನುವು ಮಾಡಿಕೊಡುವ ಗುರಿ ಹೊಂದಿದೆ.

ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಮಾಹಿತಿ ನೀಡಿರುವ ಸಚಿವ ಅಮಿತ್ ಶಾ, ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರವು ಶಂಕಿತರ ನೋಂದಣಿಯ ದತ್ತಾಂಶವನ್ನು ಕೃತಕ ಬುದ್ಧಿಮತ್ತೆ ಚಾಲಿತ ವಂಚನೆ ಪತ್ತೆ ವ್ಯವಸ್ಥೆಗೆ ನೀಡುವ ಮೂಲಕ ಈ ಕ್ರಮವು ಅಕ್ರಮ ಹಣವನ್ನು ವರ್ಗಾಯಿಸಲು ವಂಚಕರು ಬಳಸುವ ಬ್ಯಾಂಕ್ ಖಾತೆಗಳನ್ನು ತ್ವರಿತವಾಗಿ ಪತ್ತೆಹಚ್ಚಿ ರದ್ದುಗೊಳಿಸುತ್ತದೆ ಎಂದು ತಿಳಿಸಿದ್ದಾರೆ.

---

ದೇಶಾದ್ಯಂತ ನ್ಯಾಯಾಲಯಗಳ ಆಧುನೀಕರಣಕ್ಕಾಗಿ ನೀಲ ನಕ್ಷೆಯನ್ನು ಸಿದ್ಧಪಡಿಸಲು ಮತ್ತು ಈ ಉದ್ದೇಶಕ್ಕಾಗಿ 40 ರಿಂದ 50 ಸಾವಿರ ಕೋಟಿ ರೂಪಾಯಿಗಳ ಸರ್ಕಾರಿ ಹಂಚಿಕೆಯನ್ನು ಪಡೆಯಲು ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಅರವಿಂದ್ ಕುಮಾರ್ ಅವರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸುವುದಾಗಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಘೋಷಿಸಿದ್ದಾರೆ.

ನ್ಯಾಯಾಂಗ ಮೂಲಸೌಕರ್ಯ ಸಲಹಾ ಸಮಿತಿಯು ಸರ್ಕಾರದಿಂದ ಗಣನೀಯ ಆರ್ಥಿಕ ನೆರವಿನ ಮೂಲಕ ನ್ಯಾಯಾಲಯಗಳಲ್ಲಿ ಮೂಲಸೌಕರ್ಯ ಕೊರತೆಗಳನ್ನು ನಿವಾರಿಸುತ್ತದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಅರವಿಂದ್ ಕುಮಾರ್ ಅವರೊಂದಿಗೆ ಸಮಿತಿಯಲ್ಲಿ ಕೊಲ್ಕತ್ತಾ, ಪಂಜಾಬ್, ಹರಿಯಾಣ ಮತ್ತು ಬಾಂಬೆ ಹೈಕೋರ್ಟ್‌ಗಳ ನ್ಯಾಯಮೂರ್ತಿಗಳು ಇರಲಿದ್ದಾರೆ. ಕೇಂದ್ರ ಲೋಕೋಪಯೋಗಿ ಇಲಾಖೆಯ ಮಹಾನಿರ್ದೇಶಕರು ಮತ್ತು ಸುಪ್ರೀಂಕೋರ್ಟ್‌ನ ಪ್ರಧಾನ ಕಾರ್ಯದರ್ಶಿಗಳು ಸಹ ಸಮಿತಿಯ ಸದಸ್ಯರಾಗಿರುತ್ತಾರೆ ಎಂದು ಅವರು ತಿಳಿಸಿದರು.

---

ರಾಷ್ಟ್ರೀಯ ಶಿಕ್ಷಣ ನೀತಿ–2020 ರ ಮೂಲಕ ಸರ್ಕಾರ ಮಾತೃಭಾಷೆ, ಭಾರತೀಯ ಜ್ಞಾನ ಸಂಪ್ರದಾಯ ಮತ್ತು ಕೃತಕಬುದ್ಧಿಮತ್ತೆ ಆಧಾರಿತ ಶಿಕ್ಷಣವನ್ನು ಆಧಾರಿಸಿದ ಸಂಶೋಧನೆ ಮತ್ತು ನಾವೀನ್ಯತೆಯನ್ನು ನಿರಂತರವಾಗಿ ಉತ್ತೇಜಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಭಾರತೀಯ ಸಮಾಜ–ವಿಜ್ಞಾನ ಸಂಶೋಧನಾ ಮಂಡಳಿಯ 58ನೇ ಸಂಸ್ಥಾಪನಾ ದಿನಾಚರಣೆ ಉದ್ದೇಶಿಸಿ ಮಾತನಾಡಿದ ಅವರು, ಈ ಕಾರಣದಿಂದಾಗಿ ಜಾಗತಿಕ ದಕ್ಷಿಣವು ಭಾರತದ ಕಡೆ ನಂಬಿಕೆ, ಪರಿಹಾರ ಮತ್ತು ನಾಯಕತ್ವದ ನಿರೀಕ್ಷೆಗಳೊಂದಿಗೆ ನೋಡುತ್ತಿದೆ ಎಂದರು.

ಭಾರತೀಯ ಸಮಾಜ–ವಿಜ್ಞಾನ ಸಂಶೋಧನಾ ಮಂಡಳಿಯು ನೀತಿ ನಿರೂಪಣೆಯನ್ನು ಬಲಪಡಿಸುತ್ತಿದೆ ಮತ್ತು ಜಾಗತಿಕ ವೇದಿಕೆಯಲ್ಲಿ ಭಾರತದ ಭೌತಿಕ ಸಂಪ್ರದಾಯವನ್ನು ಸ್ಥಾಪಿಸುತ್ತಿದೆ ಎಂದು ಅವರು ಶ್ಲಾಘಿಸಿದರು.

2047ರ ವಿಕಸಿತ ಭಾರತದ ಗುರಿಯನ್ನು ಸಾಧಿಸಲು ನಾಗರಿಕರು ಭಾರತದ ಸಾವಿರ ವರ್ಷಗಳ ಇತಿಹಾಸ, ಹೋರಾಟ ಮತ್ತು ಸಾಂಸ್ಕೃತಿಕ ಪ್ರಜ್ಞೆಯ ತಿಳಿವಳಿಕೆ ಮೂಲಕ ಆತ್ಮವಿಶ್ವಾಸದಿಂದ ಮುಂದುವರೆಯಬೇಕು ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಪ್ರಧಾನ್ ಮನವಿ ಮಾಡಿದರು.

---

ಅಮಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

---

ಬ್ಯಾಡ್ಮಿಂಟನ್‌ನಲ್ಲಿ, ಭಾರತೀಯ ಶಟ್ಲರ್‌ಗಳಾದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿರುವ ನಿಮಿಬುಟ್ರ್ ಕ್ರೀಡಾಂಗಣದಲ್ಲಿ ಥೈಲ್ಯಾಂಡ್ ಓಪನ್ 2026 ಬ್ಯಾಡ್ಮಿಂಟನ್ ಅಭಿಯಾನವನ್ನು ಗೆಲುವಿನೊಂದಿಗೆ ಪ್ರಾರಂಭಿಸಿದರು.

ಅವರು ಇಂಡೋನೇಷ್ಯಾದ ಪುತ್ರ ಎರ್ವಿಯಾನ್ಸ್ಯಾ ಮತ್ತು ಬಾಗಾಸ್ ಮೌಲಾನಾ ಅವರನ್ನು 21–19, 23–21, 21–10 ಸೆಟ್‌ಗಳಿಂದ ಸೋಲಿಸಿ, ಎರಡನೇ ಸುತ್ತಿಗೆ ಪ್ರವೇಶಿಸಿದರು.

ಭಾರತೀಯ ಜೋಡಿ ಮುಂದಿನ ಸುತ್ತಿನಲ್ಲಿ ಮಲೇಷ್ಯಾದ ಬ್ರಿಯಾನ್ ಜೆರೆಮಿ ಗೂಂಟಿಂಗ್ ಮತ್ತು ಮುಹಮ್ಮದ್ ಹೈಕಲ್ ಅವರನ್ನು ಎದುರಿಸಲಿದೆ.

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ–ಸೆನ್ಸೆಕ್ಸ್ 1 ಸಾವಿರದ 456 ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ 74 ಸಾವಿರದ 559 ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ–ನಿಫ್ಟಿ 436 ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ 23 ಸಾವಿರದ 380 ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ 95 ರೂಪಾಯಿ 63 ಪೈಸೆಯಷ್ಟಾಗಿದೆ.

___________ ಮುಕ್ತಾಯ __________